O.S.No.178/2020
P.W.:2

ಈ ದಿನ ದಿಃ14.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಸಿಜಿಪಿ ರವರಿಂದಃ-**

ವಾದಿಯಾದ ಶ್ರೀ ಸೋಮಯ್ಯ ರವರು ನನಗೆ ತಂದೆಯಾಗಬೇಕು. ನನಗೆ ಈ ದಾವೆಯಲ್ಲಿ ವಾದಿಯು ಸಾಮಾನ್ಯ ಅಧಿಕಾರ ಪತ್ರ ಬರೆದುಕೊಟ್ಟಿದ್ದು, ನಾನು ವಾದಿಯ ಪರವಾಗಿ ಸಾಕ್ಷ್ಯ ನುಡಿಯಲು ಬಂದಿದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ, ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯಸಂಗತಿಗಳಾಗಿರುತ್ತವೆ.

ವಾದಿ ನನಗೆ ಬರೆದುಕೊಟ್ಟ ಸಾಮಾನ್ಯ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಈ ಪ್ರಕರಣದಲ್ಲಿ ಪಿ.ಡಬ್ಲ್ಯೂ -1 ರವರು ತಮ್ಮ ಮುಖ್ಯವಿಚಾರಣೆಯ ಸಾಕ್ಷ್ಯದ ಸಮಯದಲ್ಲಿ ಹಾಜರುಪಡಿಸಿದ ದಾಖಲೆಗಳನ್ನೇ ನನ್ನ ಮುಖ್ಯವಿಚಾರಣೆಯಲ್ಲಿಯು ನಿಶಾನೆಗಳನ್ನಾಗಿ ಗುರುತಿಸಬೇಕೆಂದು ಕೇಳಿಕೊಳ್ಳುತ್ತೇನೆ.

7 ಡಿಮ್ಯಾಂಡ್ ರಿಜಿಸ್ಟರ್ ಎಕ್ಸ್ ಟ್ರಾಕ್ಟ್ ಗಳ ದೃಢೀಕೃತ ಪ್ರತಿಗಳನ್ನು ಹಾಜರು ಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-2 ರಿಂದ ನಿಪಿ-8 ಎಂದು ಗುರುತಿಸಲಾಯಿತು.

ದಿನಾಂಕ.08.06.2020ರಂದು ಸಾತನೂರು ಪೊಲೀಸ್ ಠಾಣೆಯವರು ನೀಡಿದ ಒಂದು ಸ್ವೀಕೃತಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-9 ಎಂದು ಗುರುತಿಸಲಾಯಿತು.

ನನ್ನ ಅಜ್ಜಿಯಾದ ಚಿಕ್ಕನಿಂಗಮ್ಮ ರವರ ಮರಣ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-10 ಎಂದು ಗುರುತಿಸಲಾಯಿತು.

ಒಂದು ಋಣಭಾರ ರಾಹಿತ್ಯ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

ದಿನಾಂಕ.02.06.2020ರಂದು ಉಪತಹಶೀಲ್ದಾರ್, ಸಾತನೂರು ಹೋಬಳಿ ರವರು ನೀಡಿದ ನಮ್ಮ ಕುಟುಂಬದ ವಂಶವೃಕ್ಷವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-12 ಎಂದು ಗುರುತಿಸಲಾಯಿತು.

O.S.No.178/2020
P.W.:2

**<u>ಪಾಟೀ ಸವಾಲು:-</u>**

ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೇಳಿದ್ದು, ಆಲಿಸಿ ಕಾಲಾವಕಾಶ ನೀಡಲಾಯಿತು.

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**